



ಅರುಣ ಪಿ. ಭಟ್ಟ


## ವಾರ ಭವಿಷ್ಯ: 13.02.2025ರಿಂದ 19.02.2025ರವರೆಗೆ




ಶ್ರಮದ ಕೆಲಸಗಳಿಂದ ಸಾರ್ಥಕ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳ ಜೊತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಬಾಕಿ ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಪೋಷಕರ ಸಂತೋಷಕ್ಕೆ ನೀವು ಕಾರಣರಾಗುತ್ತೀರಿ. ಶುಭದಿನ: 18. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಆದಾಯ ವೃದ್ಧಿಯಾಗಲಿದೆ. ನೀವು ಒಬ್ಬರಿಗೆ ಒಳ್ಳೆಯದು ಬಯಸಿದರೆ ಅದಕ್ಕೆ ಕೆಲವರು ಅಪಾರ್ಥ ಕಲ್ಪಿಸುವ ಸಂಭವವುಂಟು. ವಾರವಿಡೀ ನಿಮ್ಮ ಮೇಲಧಿಕಾರಿಗಳ ಇಲ್ಲವೆ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ನಿಮ್ಮ ನಡತೆಯು ಹೆಚ್ಚು ಪ್ರಶಂಸೆಗೆ ಒಳಪಡುವುದು. ಮಂಗಲ ಕಾರ್ಯದಲ್ಲಿ ಭಾಗಿಯಾಗುವಿರಿ. ಶುಭದಿನ: 19. ಆದಿತ್ಯ ಹೃದಯ ಪಠಿಸಿರಿ.





ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ನಿಮ್ಮ ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ. ಕೆಲಸದಲ್ಲಿ ಯಶಸ್ಸನ್ನು ಪಡೆಯುತ್ತೀರಿ. ಹಣಕಾಸಿನ ಸ್ಥಿತಿ ಉತ್ತಮವಾಗಿರುವುದು. ಶುಭದಿನ: 16. ಸೌಂದರ್ಯ ಲಹರಿ ಪಠಿಸಿರಿ.





ಕೆಲಸದಲ್ಲಿ ಅನಗತ್ಯ ತೊಂದರೆ ಬರಬಹುದು. ಸಮಸ್ಯೆಗೆ ಪರಿಹಾರ ಹುಡುಕಿ, ನಿಮ್ಮ ಕೆಲಸಗಳನ್ನು ನೀವೇ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆ ಹುಸಿಯಾಗಲಿದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಓದು ಮುಂದುವರಿಕೆಯ ಬಗ್ಗೆ ಚಿಂತನೆ ನಡೆಸುವಿರಿ. ಉದ್ಯಮಿಗಳಿಗೆ ಸ್ಥಿರವಾಗಿ ಬರುತ್ತದೆ. ಶುಭದಿನ: 15. ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾ ರಹಿತ ಹೂಡಿಕೆಗಳಿಂದ ಧನ ನಷ್ಟ ಸಂಭವ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದ ಅತಿಶಯೋಕ್ತಿಯಾಗಿ ಕಾಣಬಹುದು. ಮತ್ತೊಬ್ಬರ ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನೀವು ನಿಮ್ಮ ಮಕ್ಕಳ ಮೇಲೆ ಇಟ್ಟಿರುವ ಭರವಸೆ ಕಾರ್ಯರೂಪಕ್ಕೆ ಬರುವುದು. ಸಾಲದ ತೀರುವಳಿ ಮಾಡಿದಲ್ಲಿ ಅನುಕೂಲವಾಗುವುದು. ಶುಭದಿನ: 14. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ





ಹಿರಿಯರಿಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಆರ್ಥಿಕ ಗಳಿಕೆ ಇದ್ದರೂ ದುಡುಕುತನ ದೊಡ್ಡ ಪೆಟ್ಟನ್ನು ನೀಡಬಹುದಾಗಿದೆ. ಮನಸ್ಸು ಮರ್ಕಟ ಇದ್ದಂತೆ ಮನೋಕಾಮನೆಗಳನ್ನು ನಿಯಂತ್ರಿಸಿ. ದೊಡ್ಡ ಯೋಜನೆಯೊಂದು ನಿಮ್ಮ ಬುದ್ಧಿ ಕೌಶಲ್ಯಕ್ಕೆ ಎದುರಾಗುವುದು. ಉದ್ಯೋಗದಲ್ಲಿ ಬದಲಾವಣೆ, ಬಡ್ತಿ ಸಂಭವವಿದೆ. ಶುಭದಿನ: 16. ಹನುಮಾನ್ ಚಾಲೀಸ್ ಪಠಿಸಿರಿ.




ಕೆಲಸದಲ್ಲಿ ಹೆಚ್ಚಿನ ವಿಳಂಬ. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಇದೆ. ಟೀಕಿಸುವಂತಹ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ಅವಿವಾಹಿತರಾಗಿದ್ದಲ್ಲಿ ಉತ್ತಮ ಸಂಬಂಧ ಕೂಡಿ ಬರುವ ಅವಕಾಶಗಳು ವಾರದ ಆರಂಭದಲ್ಲೇ ಗೋಚರಿಸುತ್ತವೆ. ಶುಭದಿನ: 17. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.





ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗಳಿಗೆ ಹೋಗದಿರುವುದು ತುಂಬಾ ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನಗಳು ಕಂಡುಬರುತ್ತಾರೆ, ಆದಷ್ಟು ದೂರ ನಿಲ್ಲಿ. ಅತಿಯಾದ ಮಾನಸಿಕ ಒತ್ತಡವನ್ನು ದೂರವಿಡಿ. ಸಹೋದ್ಯೋಗಿಗಳ ಜತೆ ನಿಮ್ಮ ಯಶಸ್ಸಿನ ಗುಟ್ಟನ್ನು ಹಂಚಿಕೊಳ್ಳಬೇಡಿ. ವಾರದ ಕೊನೆಯಲ್ಲಿ ಒಳಿತಾಗುವುದು. ಶುಭದಿನ: 19. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಬಳಸಿಕೊಳ್ಳುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನ ಹೆಚ್ಚಾಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ. ಸಂಬಂಧಿಕರ ಜೊತೆ ಅನಗತ್ಯವಾದ ವಾದ– ವಿವಾದಗಳಾಗಿ, ಒತ್ತಡ ಏರ್ಪಡುತ್ತವೆ. ದೈಹಿಕ ಮತ್ತು ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಮನೆಯ ಕೆಲಸದಲ್ಲಿ ಪಾಲ್ಗೊಳ್ಳಿ. ಶುಭದಿನ: 16. ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಸುವುದು ಒಳ್ಳೆಯದು. ಪಶುಸಂಗೋಪನೆ, ಕೃಷಿ ಚಟುವಟಿಕೆಗಳಲ್ಲಿ ಉತ್ತಮ ಬೆಳವಣಿಗೆ ಕಂಡುಬರುತ್ತದೆ. ಅತ್ಯಂತ ಚುರುಕುತನದಿಂದ ಇದ್ದ ನೀವು, ಆಲಸ್ಯದಿಂದ ಕೆಲಸ ಕಾರ್ಯಗಳಲ್ಲಿ ಹಿನ್ನಡೆಯನ್ನು ಅನುಭವಿಸಬೇಕಾಗುವುದು. ಸಂಬಂಧಗಳಲ್ಲಿ ಸಂತಸ ಇರುತ್ತದೆ. ನಿಮ್ಮ ಮಕ್ಕಳ ಪಠ್ಯೇತರ ಆಸಕ್ತಿಯನ್ನು ಗುರುತಿಸಿ. ಶುಭದಿನ: 14. ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿವಿನಿಂದ ಹೊರಬರಲು ಪ್ರಯತ್ನ ಮೆಚ್ಚುವಂಥದ್ದು. ಮನೆಗೆ ನೆಂಟರಿಷ್ಟರ ಆಗಮನ. ಮಂಗಲ ಕಾರ್ಯ ನೆರವೇರಿಸುವಿರಿ. ಶುಭದಿನ: 18. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿವೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತದೆ. ನಿಮ್ಮ ಕ್ರಿಯಾಶೀಲತೆಯಿಂದ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ. ಯಶಸ್ವಿದಾಯಕ ನಿರ್ಣಯಗಳಿಂದ ಸ್ಥಾನ ಗಟ್ಟಿಗೊಳಿಸಿಕೊಳ್ಳುವಿರಿ. ಹಣಕಾಸಿನ ವ್ಯವಹಾರದಲ್ಲಿ ನಿಮ್ಮ ನಿರ್ವಹಣೆ, ಸಾಮರ್ಥ್ಯ ಪ್ರಶಂಸೆಯನ್ನು ತಂದುಕೊಡುವುದು. ಅನಿರೀಕ್ಷಿತ ದೂರ ಪ್ರವಾಸ. ಶುಭದಿನ: 19. ವಿಷ್ಣು ಸಹಸ್ರನಾಮ ಮಾಡಿರಿ.